# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 02-07-2022 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಡಾ॥ ಶಾಹೀನಾ, ವೈದ್ಯಾಧಿಕಾರಿ, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
4. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
5. ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)
6. ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ)
7. ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ್ ಅಸೋಸಿಯೇಷನ್(ರಿ)
8. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
2. ಶ್ರೀ ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
3. ಸಂಗೀತಾ, ಇಂಜಿನಿಯರ್, ಬಿಡಬ್ಲ್ಯೂಎಸ್.ಎಸ್.ಬಿ ಇಲಾಖೆ,
4. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
5. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಸಂಚಾರ ಮತ್ತು ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
6. ಶ್ರೀ ಪುಟ್ಟಸ್ವಾಮಿ, ಬೆಸ್ಕಾಂ ಇಲಾಖೆ,
7. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
8. ಶ್ರೀ ವೆಂಕಟೇಶ್, ತೋಟಗಾರಕೆ ಇಲಾಖೆ,
9. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ, ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯ ನಡವಳಿಗಳು**

1) **ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)** ರವರು ಮಾತನಾಡಿ, ಕಮ್ಮನಹಳ್ಳಿ ಮುಖ್ಯರಸ್ತೆ ಹಾಗೂ ಬಿಡಿಎ ಬಡಾವಣೆ ರಸ್ತೆಗಳಲ್ಲಿ ಮ್ಯಾನ್‌ಹೋಲ್ ಗಳನ್ನು ರಸ್ತೆಯ ಮಟ್ಟಕ್ಕಿಂತ ಎತ್ತರಿಸಬೇಕಾಗಿರುತ್ತದೆ ಎಂದು ಸಭೆಗೆ ತಿಳಿಸಿದಾಗ, ಈ ಬಗ್ಗೆ ಚರ್ಚಿಸಲಾಗಿ, ಸಭೆಯಲ್ಲಿ ಹಾಜರಿದ್ದ ಬಿಡಬ್ಲ್ಯೂಎಸ್‌ಎಸ್‌ಬಿ ಅಧಿಕಾರಿಗಳು ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿರುತ್ತಾರೆ.

2) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)** ರವರು ಮಾತನಾಡಿ, ರಾಮಯ್ಯ ಬಡಾವಣೆ 2ನೇ ಎ ಕ್ರಾಸ್‌ನಲ್ಲಿ ಚರಂಡಿಯಲ್ಲಿ ಹೂಳು ತುಂಬಿದ್ದು, ಮಳೆ ನೀರು ಸರಾಗವಾಗಿ

ಹರಿಯುತ್ತಿರುವುದಿಲ್ಲ ಎಂದು ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಚರ್ಚಿಸಿದಾಗ, ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿರುತ್ತಾರೆ.

3) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)** ರವರು ಮಾತನಾಡಿ, ವಾರ್ಡ್ ಪ್ರದೇಶದಲ್ಲಿ ಐ ಮಸ್ತ್ ಲೈಟ್‌ಗಳು ಉರಿಯುತ್ತಿರುವುದಿಲ್ಲ ಹಾಗೂ ಡಿ.ಪಿ ಸ್ವಿಚ್‌ಗಳು ಕಾರ್ಯನಿರ್ವಹಿಸುತ್ತಿರುವುದಿಲ್ಲ ಎಂದು ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಹಾಜರಿದ್ದ ಬೀದಿ ದೀಪಗಳ ಗುತ್ತಿಗೆದಾರರು ಐ ಮಸ್ತ್ ಲೈಟ್‌ಗಳನ್ನು ದುರಸ್ತಿ ಪಡಿಸಲು ಕ್ರಮ ಕೈಗೊಳ್ಳುವುದಾಗಿ ಹಾಗೂ ಡಿ.ಪಿ ಸ್ವಿಚ್‌ಗಳನ್ನು ದುರಸ್ತಿಪಡಿಸುವುದಾಗಿ ಸಭೆಗೆ ತಿಳಿಸಿರುತ್ತಾರೆ.

4) **ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ್ ಅಸೋಸಿಯೇಷನ್(ರಿ)** ರವರು ಮಾತನಾಡಿ, ಕಮ್ಮನಹಳ್ಳಿ ಮುಖ್ಯರಸ್ತೆಯಲ್ಲಿ ವಾಹನ ಸಂಚಾರ ಅಧಿಕವಾಗಿರುತ್ತದೆ ಹಾಗೂ ವಾಣಿಜ್ಯ ಚಟುವಟಿಕೆಗಳು ಹೆಚ್ಚಾಗಿರುವುದರಿಂದ ರಸ್ತೆಯ ಬದಿಗಳಲ್ಲಿ ವಾಹನಗಳ ನಿಲುಗಡೆ ಮಾಡುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗಿರುತ್ತದೆ. ಆದ್ದರಿಂದ ಕಮ್ಮನಹಳ್ಳಿ ಮುಖ್ಯರಸ್ತೆಯಲ್ಲಿ ವಾಹನ ನಿಲುಗಡೆಯನ್ನು ನಿಷೇಧಿಸಲು ಸಭಾ ಗಮನಕ್ಕೆ ತಂದಾಗ ಸಭೆಯಲ್ಲಿ ಹಾಜರಿದ್ದ ಸಹಾಯಕ ಸಬ್‌ಇನ್ಸ್‌ಪೆಕ್ಟರ್, ಕಾನೂನು ಸುವ್ಯವಸ್ಥೆ ರವರು ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

5) **ಡಾ॥ ಶಾಹೀನಾ, ವೈದ್ಯಾಧಿಕಾರಿ, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ, ರವರು ಮಾತನಾಡಿ,** ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ಈವರೆಗೆ ಒಟ್ಟಾರೆಯಾಗಿ 111615 ವ್ಯಾಕ್ಸಿನೇಷನ್ ಹಾಗೂ 12 ವರ್ಷಗಳ ಮೇಲ್ಪಟ್ಟ ವಯೋಮಾನದವರಿಗೆ 16 ಶಾಲೆಗಳನ್ನು ಗುರುತಿಸಿ ವ್ಯಾಕ್ಸಿನೇಷನ್ ನೀಡಲಾಗುತ್ತಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

Prasanna Kumar .K

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

**ಪ್ರತಿಯನ್ನು**

1) ಜಂಟಿ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.